# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 373 |
| 2 | ಸದಸ್ಯರ ಹೆಸರು | ಶ್ರೀ ಆರ್.ಬಿ.ತಿಮ್ಮಾಪೂರ<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | 03.02.2021 |
| 4 | ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪೋಡಿ ಮುಕ್ತ ಗ್ರಾಮ ಮಾಡುವ ಯೋಜನೆಯು ಯಾವ ಹಂತದಲ್ಲಿದೆ; 2018-19ನೇ ಸಾಲಿನಿಂದ 2020-21ನೇ ಸಾಲಿನ ಅವಧಿಯಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿನ ಯಾವ ಯಾವ ಭಾಗಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ; | ಬಾಗಲಕೋಟೆ ಜಿಲ್ಲೆಯ ಎಲ್ಲಾ 7 ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ 6 ತಾಲ್ಲೂಕುಗಳಲ್ಲಿ ಪೋಡಿ ಮುಕ್ತ ಗ್ರಾಮ ಯೋಜನೆಯನ್ನು ಪ್ರಾರಂಭಿಸಲಾಗಿತ್ತು ಅದರಂತೆ ಜಿಲ್ಲೆಯ ಒಟ್ಟು 610 ಗ್ರಾಮಗಳ ಪೈಕಿ 590 ಗ್ರಾಮಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಿ ಒಟ್ಟು 60,476 ಬ್ಲಾಕಗಳ ಅಳತೆ ಮತ್ತು ದುರಸ್ತಿ ಕಾರ್ಯ ಪೂರೈಸಿ ಏಕ ಮಾಲಿಕತ್ವದ ಪಹಣಿಗಳನ್ನು ಸೃಜಿಸುವ ಮೂಲಕ ಪೋಡಿ ಮುಕ್ತ ಗ್ರಾಮ ಯೋಜನೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ. ಉಳಿದಂತ ಗ್ರಾಮಗಳಲ್ಲಿ ಆಲಮಟ್ಟಿ ಜಲಾಶಯದ ಮುಳುಗಡೆ ಕಾರಣ ಅಳತೆಗೆ ಅರ್ಹ ಬ್ಲಾಕಗಳಿಲ್ಲದಿರುವುದರಿಂದ ಮತ್ತು 2 ಗ್ರಾಮಗಳಲ್ಲಿ ರೈತರ ಅಸಹಕಾರದ ಕಾರಣ ಅಳತೆ ಕಾರ್ಯ ಪೂರೈಸಿರುವುದಿಲ್ಲ. |
| ಆ) | ಮೋಜಿಣಿ ಹಾಗೂ ಪೋಡಿಗಾಗಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಎಷ್ಟು ದಿನಗಳಿಂದ ಬಾಕಿ ಉಳಿದಿರುತ್ತದೆ; ವಿಳಂಬಕ್ಕೆ ಕಾರಣಗಳೇನು; (ತಾಲ್ಲೂಕುವಾರು ವಿವರ ಒದಗಿಸುವುದು ) | ಬಾಗಲಕೋಟೆ ಜಿಲ್ಲೆಯಲ್ಲಿ ಮೋಜಿಣಿ ವ್ಯವಸ್ಥೆಯಡಿ ಮೋಜಿಣಿ ಮತ್ತು ಪೋಡಿಗಾಗಿ 8555 ಅರ್ಜಿಗಳು ಬಾಕಿಯಿರುತ್ತವೆ. |

**ಬಾಗಲಕೋಟೆ ಜಿಲ್ಲೆಯಲ್ಲಿ ಮೋಜಿಣಿ ಹಾಗೂ ಪೋಡಿಗಾಗಿ ಬಾಕಿಯಿರುವ ಅರ್ಜಿಗಳ ತಾಲ್ಲೂಕುವಾರು ವಿವರ.**

| ತಾಲ್ಲೂಕು | ಆರಂಬಿಕ ಶಿಲ್ಕು | ಸ್ವೀಕೃತಿ (Apr-20 To Dec-20) | ಒಟ್ಟು | ವಿಲೇ (Apr-20 To Dec-20) | ಬಾಕಿ |
|---|---|---|---|---|---|
| ಜಮಖಂಡಿ | 1044 | 3646 | 4690 | 3057 | 1633 |
| ಬೀಳಗಿ | 850 | 2062 | 2912 | 1969 | 943 |
| ಮುಧೋಳ | 2252 | 4267 | 6519 | 3760 | 759 |
| ಬಾದಾಮಿ | 506 | 29 9 | 3435 | 2772 | 663 |
| ಬಾಗಲಕೋಟೆ | 243 | 1997 | 2240 | 1882 | 358 |
| ಹುನಗುಂದ | 553 | 2038 | 2591 | 2046 | 545 |
| ಗುಳೇದಗುಡ್ಡ | 149 | 980 | 1129 | 898 | 231 |
| ಇಳಕಲ್ಲು | 582 | 1666 | 2248 | 1525 | 723 |
| ರಬಕವಿ ಬನಹಟ್ಟಿ | 704 | 1737 | 2441 | 1741 | 700 |
| ಒಟ್ಟು | **6883** | **21322** | **28205** | **19650** | **8555** |

| | | |
|---|---|---|
| | | **ಪೋಡಿ ಪ್ರಕರಣಗಳ ವಿಲೇವಾರಿ ವಿಳಂಬಕ್ಕೆ ಕಾರಣಗಳು**<br>(1)ಜಮೀನಿನ ಆಕಾರಬಂದು ಮತ್ತು ಪಹಣಿಗಳಲ್ಲಿ ದಾಖಲಾಗಿ ರುವ ವಿಸ್ತೀರ್ಣದಲ್ಲಿ ವ್ಯತ್ಯಾಸ ಹಾಗೂ ಪಹಣಿಯ ಕಾಲಂ 3 ಮತ್ತು 9 ರಲ್ಲಿರುವ ಕ್ಷೇತ್ರದಲ್ಲಿ ವ್ಯತ್ಯಾಸ<br>(2).ಸರ್ಕಾರದ ಸೂಚನೆಗಳನ್ವಯ ಭೂಮಂಜೂರಾತಿ ಪ್ರಕರಣ ಗಳಲ್ಲಿ ನಮೂನೆ 1 ರಿಂದ 5 ಭರ್ತಿ ಮಾಡ ಬೇಕಾಗಿದ್ದು ಈ ವೇಳೆ ಮಂಜೂರಾತಿ ದಾಖಲೆಗಳು ಸರಿಯಾಗಿ ಲಭ್ಯವಾಗದೇ ಇರುವುದ ರಿಂದ<br>(3)ಮೂಲ ಭೂದಾಖಲೆಗಳು/ಕಂದಾಯ ದಾಖಲೆಗಳು ಶಿಥಿಲ ವಾಗಿರುವುದನ್ನು ಪುನರ್ ನಿರ್ಮಾಣ ಮಾಡಲು ಹೆಚ್ಚಿನ ಕಾಲಾವಕಾಶ ಬೇಕಾಗುವುದು<br>(4). ಭೂಮಂಜೂರಾತಿ ಪ್ರಕರಣಗಳಲ್ಲಿ ಮಂಜೂರಿಯಂತೆ ಮತ್ತು ಅನುಭವದಂತೆ ಕ್ಷೇತ್ರದಲ್ಲಿ ವ್ಯತ್ಯಾಸ ಮತ್ತು ಸರ್ವೆ ನಂಬರನಲ್ಲಿ ವ್ಯತ್ಯಾಸವಿರುವುದರಿಂದ<br>(5).ಭೂಮಂಜೂರಾತಿ ಪ್ರಕರಣಗಳಲ್ಲಿ ಜಮೀನಿನ ಆಕಾರ ಬಂದಿನ ವಿಸ್ತೀರ್ಣಕ್ಕಿಂತ ಹೆಚ್ಚಿನ ಕ್ಷೇತ್ರಕ್ಕೆ ಮಂಜೂರಿ ಆದೇಶ ಮಾಡಿರುವುದರಿಂದ, ಮಂಜೂರಿ ಆದೇಶ ಮತ್ತು ಪಹಣಿ ಸರಿಪಡಿಸುವಲ್ಲಿ ತೊಂದರೆ ಇರುವುದು,<br>(6). ಅರ್ಜಿದಾರರು ಹಕ್ಕು ಹೊಂದಿರುವ ಮತ್ತು ಅನುಭವದ ಸ.ನಂ ಬೇರೆ ಬೇರೆಯಾಗಿರುವುದು<br>(7).ಅಳತೆ ವೇಳೆ ಗಡಿ ಮತ್ತು ಹಕ್ಕಿನ ಕುರಿತು ತಕರಾರು ಉದ್ಭವಿಸುವುದರಿಂದ<br>(8).ಜಮೀನಿನ ಕುರಿತು ನ್ಯಾಯಾಲಯದಲ್ಲಿ ವಿವಾದಗಳಿರುವುದ ರಿಂದ ಇತ್ಯಾದಿ ಕಾರಣಗಳಿಂದ ಪೋಡಿ ಪ್ರಕರಣಗಳ ವಿಲೇವಾರಿ ಯಲ್ಲಿ ವಿಳಂಬವಾಗಿರುತ್ತದೆ. |
| ಇ) | ಅವುಗಳನ್ನು ಇತ್ಯರ್ಥಗೊಳಿಸುವ ಉದ್ದೇಶವು ಸರ್ಕಾರದ ಗಮನದಲ್ಲಿ ದೆಯೇ; ಇದ್ದಲ್ಲಿ, ಯಾವಾಗ ಇತ್ಯರ್ಥ ಗೊಳಿಸಲಾಗುವುದು? | ಬಾಕಿ ಪೋಡಿ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಉದ್ದೇಶವು ಸರ್ಕಾರದ ಗಮನದಲ್ಲಿದೆ.<br>**ಪೋಡಿ ಅರ್ಜಿಗಳ ಶೀಘ್ರ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳು**<br>1) ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್ ಗಳನ್ನು ನಡೆಸಲಾಗುತ್ತಿದೆ<br>2)ಕಂದಾಯ ಇಲಾಖೆಯ ಅಭಿಲೇಖಾಲಯದ ಎಲ್ಲಾ ಕಡತ ಗಳನ್ನು ಕ್ಯಾಟ್-ಲಾಗ್ ಮತ್ತು ಇಂಡೆಕ್ಸಿಂಗ್ ಮಾಡಲು ಸರ್ಕಾರ ದಿಂದ ಸೂಚಿಸಲಾಗಿದೆ.<br>3) ಸರ್ಕಾರದ ಸೂಚನೆಯನ್ವಯ ನಮೂನೆ 1 ರಿಂದ 5 ಅನ್ನು ಭರ್ತಿ ಮಾಡಲು ಅಗತ್ಯ ಸೂಚನೆ ಮತ್ತು ಮಾರ್ಗಸೂಚಿಗಳನ್ನು ನೀಡಲಾಗಿದೆ.<br>4) ಇಲಾಖೆಯಲ್ಲಿ ಅಳತೆ ಕೋರಿ ಸ್ವೀಕೃತವಾಗುವ ಎಲ್ಲಾ ಅರ್ಜಿ ಗಳನ್ನು ಮೋಜಿಣಿ ತಂತ್ರಾಂಶದ ಮುಖಾಂತರ ಆನ್.ಲೈನ್ ನಲ್ಲಿ ಸ್ವೀಕರಿಸಲಾಗುತ್ತಿದ್ದು ತಂತ್ರಾಂಶದ ಪ್ರತಿ ಹಂತ ದಲ್ಲಿಯೂ FIFO |

| | | |
|---|---|---|
| | | (ಸರದಿ ಸಾಲಿನಂತೆ) ಅಳವಡಿಸಲಾಗಿದೆ, ಪ್ರಕರಣವು ಅಳತೆಗೆ ಯೋಗ್ಯವಾಗಿದ್ದಲ್ಲಿ FIFO (ಸರದಿ ಸಾಲಿನಂತೆ) ಅಳತೆಗಾಗಿ ಭೂಮಾಪಕರಿಗೆ ತಂತ್ರಾಂಶದ ಮೂಲಕ ಆನ್.ಲೈನ್.ನಲ್ಲಿ ವಿತರಿಸ ಲಾಗುತ್ತಿದೆ. ಪ್ರಕರಣದಲ್ಲಿ ಅಳತೆಯಾದ ನಂತರ ಭೂಮಾಪಕರು ಆನ್.ಲೈನ್ ನಲ್ಲಿ ಕಡತಗಳನ್ನು ಅಪ್‌ಲೋಡ್ ಮಾಡಲು ಹಾಗೂ ಅಪ್ಲೋಡ್ ಮಾಡಿರುವ ಕಡತಗಳ ಪರಿಶೀಲನೆ ಮತ್ತು ಅನುಮೋದ ನೆಯನ್ನು ಸಹ ಆನ್.ಲೈನ್.ನಲ್ಲೇ ನಿರ್ವಹಿಸಲಾಗುತ್ತಿದೆ. ತಂತ್ರಾಂಶದ ಮುಖಾಂತರ, ಪ್ರಕರಣಗಳ ವಿಲೇವಾರಿಯಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಿಲ್ಲದಂತೆ ಕ್ರಮವಹಿಸಲಾಗುತ್ತಿದೆ.<br>5)ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಸೂಚನೆ ನೀಡಲಾಗುತ್ತಿದೆ.<br>6) ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರ ನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>7) ಸರ್ಕಾರದ ಸೂಚನೆಯಂತೆ 2072 ಪರವಾನಗಿ ಭೂಮಾಪಕರ ಆಯ್ಕೆ ಕುರಿತು ಅಧಿಸೂಚನೆ ಹೊರಡಿಸಿ ಅರ್ಜಿಗಳನ್ನು ಆಹ್ವಾನಿ ಸಿದ್ದು, ಸಾಮಾಜಿಕ ಅಂತರ ಕಾಯ್ದುಕೊಂಡು ದಿನಾಂಕ 1-2-2021 ಮತ್ತು 2/2/2021 ರಂದು ಪರೀಕ್ಷೆಯನ್ನು ನಡೆಸಿ, ಅರ್ಹ ಅಭ್ಯರ್ಥಿ ಗಳನ್ನು ಆಯ್ಕೆ ಮಾಡಿ 4 ತಿಂಗಳ ತರಬೇತಿ ನೀಡಿ, ಅಂತಿಮ ಪರೀಕ್ಷೆ ಯಲ್ಲಿ ಉತ್ತೀರ್ಣರಾದವರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಕಾರ್ಯ ನಿಯೋಜನೆ ಮಾಡಲಾಗುವುದು. ಇದರಿಂದ ಬಾಕಿ ಪ್ರಕರಣಗಳ ವಿಲೇವಾರಿ ಮಾಡಲು ಸಾಧ್ಯವಾಗುತ್ತದೆ |

**ಸಂಖ್ಯೆ: ಕಂಇ 17 ಎಸ್‌ಎಸ್‌ಸಿ 2021**

**(ಆರ್.ಅಶೋಕ)**

ಕಂದಾಯ ಸಚಿವರು